ನ.13:

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಅವರು ಗುರುವಾರ ಜೆಡಿಎಸ್ ರಾಜ್ಯಾಧ್ಯಕ್ಷರಾಗಿ ಮರು ಆಯ್ಕೆಯಾಗಿದ್ದಾರೆ. ಈ ಕುರಿತು ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಜೆಡಿಎಸ್ ವರಿಷ್ಠ ಹಾಗೂ ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ ಅವರು, ಕುಮಾರಸ್ವಾಮಿ ಅವರನ್ನೇ ಮತ್ತೆ ಜೆಡಿಎಸ್ ರಾಜ್ಯಾಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದರು. ಎ. ಕೃಷ್ಣಪ್ಪ ಅವರ ನಿಧನದಿಂದ ತೆರವಾಗಿದ್ದ ಸ್ಥಾನಕ್ಕೆ ಮಾಜಿ ಸಿಎಂ ಕುಮಾರಸ್ವಾಮಿ ಅವರು ಆಯ್ಕೆಯಾಗಿದ್ದಾರೆ.

ಪಕ್ಷದ ಶಾಸಕರು ಹಾಗೂ ಹಿರಿಯರ ಒತ್ತಡಕ್ಕೆ ಮಣಿದು ಈ ನಿರ್ಧಾರಕ್ಕೆ ಬರಲಾಗಿದೆ. ಕುಮಾರಸ್ವಾಮಿ ಅವರಿಗೆ ಪಕ್ಷದ ಜವಾಬ್ದಾರಿಯನ್ನು ಹೊರುವ ಸಾಮರ್ಥ್ಯವಿದೆ, ಅನುಭವವಿದೆ ಎಂದು ಕಾರ್ಯಕರ್ತರು ಅಭಿಪ್ರಾಯಪಟ್ಟಿದ್ದಾರೆ ಸ್ಥಳೀಯ ಸಂಸ್ಥೆಗಳ ಚುನಾವಣೆ ಹಾಗೂ ಭವಿಷ್ಯದ ಹಿತದೃಷ್ಟಿ ಗಮನದಲ್ಲಿಟ್ಟುಕೊಂಡು ಈ ತೀರ್ಮಾನಕ್ಕೆ ಬರಲಾಗಿದೆ ಎಂದು ದೇವೇಗೌಡರು ಸಮರ್ಥಿಸಿಕೊಂಡರು.

**<u>ಪಕ್ಷದ ಸಂಘಟನೆಗಾಗಿ ಎಚ್ಡಿಕೆ ಆಯ್ಕೆ ಏಕೆ?</u>**

* ಬದಲಾದ ರಾಜಕೀಯ ಪರಿಸ್ಥಿತಿಯಲ್ಲಿ ಪಕ್ಷವನ್ನು ಮತ್ತೆ ತಳಮಟ್ಟದಿಂದ ಸಂಘಟಿಸುವುದು ಹಾಗೂ ಎರಡು ರಾಷ್ಟ್ರೀಯ ಪಕ್ಷಗಳ ವಿರುದ್ಧ ಸರಿಸಮನಾಗಿ ಹೋರಾಟ ನಡೆಸಲು ಕುಮಾರಸ್ವಾಮಿ ಸೂಕ್ತ ಆಯ್ಕೆ.
* ಬಹುತೇಕ ಶಾಸಕರು ಮತ್ತು ಕೋರ್ ಕಮಿಟಿ ಸದಸ್ಯರು ಕೂಡ ಜೆಡಿಎಸ್ ರಾಜ್ಯಾಧ್ಯಕ್ಷ ಸ್ಥಾನವನ್ನು ಕುಮಾರಸ್ವಾಮಿ ಹೆಗಲಿಗೆ ನೀಡಬೇಕೆಂದು ಒತ್ತಾಯಿಸಿದ್ದರು.
* ಆಡಳಿತರೂಢ ಕಾಂಗ್ರೆಸ್ ಹಾಗೂ ರಾಜ್ಯದಲ್ಲಿ ಬಲವಾಗಿ ಬೇರೂರುತ್ತಿರುವ ಬಿಜೆಪಿ ವಿರುದ್ಧ ಸೆಣಸಾಡಲು ಕುಮಾರಸ್ವಾಮಿಯೇ ಪಕ್ಷದ ರಾಜ್ಯಾಧ್ಯಕ್ಷರಾಗಬೇಕು ಎಂಬ ಒತ್ತಡ ಕೇಳಿ ಬಂದಿತ್ತು.
* ಮೈಸೂರು-ಕರ್ನಾಟಕ, ಮುಂಬೈ-ಹೈದರಾಬಾದ್ ಕರ್ನಾಟಕದಲ್ಲಿ ಕುಮಾರಸ್ವಾಮಿಗೆ ಸಾಕಷ್ಟು ವರ್ಚಸ್ಸು ಇರುವುದರಿಂದ ಅವರನ್ನು ಅಧ್ಯಕ್ಷರನ್ನಾಗಿ ಮಾಡಿದರೆ ಹೆಚ್ಚಿನ ಮತ ಸೆಳೆಯಬಹುದು.

**<u>ಜೆಡಿಎಸ್ ಹೊಸ ಸಾರಥಿಗಳ ವಿವರ</u>**

ಅಧ್ಯಕ್ಷ: ಎಚ್ ಡಿ ಕುಮಾರಸ್ವಾಮಿ

ಉಪಾಧ್ಯಕ್ಷ: ಮಹಾಂತೇಶ್ ಕವಗಿ ಮಠ, ಅಮರನಾಥ್ ಶೆಟ್ಟಿ

ಕಾರ್ಯದರ್ಶಿ : ದಿನಕರ್ ಶೆಟ್ಟಿ, ಶಾರದಾಪೂರ್ಯ ನಾಯಕ್, ರಿಯಾಜ್ ,ಮೀನಾಕ್ಷಿ ನಂದೀಶ್,

ಕಾರ್ಯಾಧ್ಯಕ್ಷ: ನಾರಾಯಣ ರಾವ್